KARNATAKA SUCCESS NO 1
Kannada Daily

ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.

Volume: 02 Issue-174

ಶುಕ್ರವಾರ 16 ಮೇ 2025

Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ತುರುವೇಕೆರೆ ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ 2024–25ನೆ ಸಾಲಿನ ಅನಿರ್ಬಂಧಿತ ಅನುದಾನ ಯೋಜನೆಯಡಿಯಲ್ಲಿ ಸುಮಾರು 8 ಲಕ್ಷರೂ, ವೆಚ್ಚದಲ್ಲಿ 7 ದೈಹಿಕ ವಿಕಲ ಚೇತನ ಫಲಾನುಭವಿಗಳಿಗೆ ಶಾಸಕ ಎಂ.ಟಿ.ಕೃಷ್ಣಪ್ಪ ಸ್ಕೂಟರ್ ವಿತರಿಸಿದರು. ತಾಪಂ ಇಓ ಶಿವರಾಜಯ್ಯ, ಬಸವರಾಜು, ಇಲಾಖಾಧಿಕಾರಿ ಎಂ.ಬಿ.ಶಿವಶಂಕರ್, ಮಂಜುನಾಥ್, ಸೇರಿದಂತೆ ಇಲಾಖಾಧಿಕಾರಿಗಳು ಹಾಗೂ ತಾಪಂ ಸಿಬಂದಿ ಇದರು.

## ‘ರಾಜ್ಯದಲ್ಲಿ ಮೈನಿಂಗ್ ಲಾಬಿ ಎಗ್ಗಿಲ್ಲದೆ ನಡೆಯುತ್ತಿದೆ’: ಕೋಡಿಹಳ್ಳಿ ಆರೋಪ



ತುಮಕೂರು: ಕರ್ನಾಟಕದಲ್ಲಿ ಮೈನಿಂಗ್ ಲಾಭಿ ಎಗ್ಗಿಲ್ಲದೆ ನಡೆಯುತ್ತಿದ್ದು, ಆಂಧ್ರ ಸರಕಾರ ಒಬಳಾಪುರಂ ಗಣಿಗಾರಿಕೆ ನಡೆದಿರುವ ಕರ್ನಾಟಕದಲ್ಲಿ ಎಂದು ಸ್ಪಷ್ಟಪಡಿಸಿದರೂ, ಇದುವರೆಗೂ ಕರ್ನಾಟಕ ಸರಕಾರ ಮೌನಕ್ಕೆ ಶರಣಾಗಿರುವುದನ್ನು ನೋಡಿದರೆ,ಸರಕಾರ, ವಿರೋಧಪಕ್ಷಗಳೆಲ್ಲವೂ ಶಾಮೀಲಾಗಿರುವ ಶಂಕೆ ವ್ಯಕ್ತವಾಗುತ್ತಿದೆ ಎಂದು ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು,ಗಣಿಗಾರಿಕೆ ವಿರೋಧಿಸಿ ಚಾಮರಾಜನಗರದಿಂದ ಬಳ್ಳಾರಿಯವರೆಗೂ ಪಾದಯಾತ್ರೆ ನಡೆಸಿದ ಸಿದ್ದರಾಮಯ್ಯ,ಈಗ ಕಣ್ಣುಮುಚ್ಚಿ ಕುಳಿತಿರುವುದು ಹಲವು ಅನುಮಾನಗಳನ್ನು ಹುಟ್ಟು ಹಾಕಿದೆ. ಗಣಿಗಾರಿಕೆಗೆ ಚೌಕಟ್ಟು ವಿಧಿಸಬೇಕಿದ್ದ ಸರಕಾರ, ಅಕ್ರಮ ಗಣಿಗಾರಿಕೆಯನ್ನು ಸಕ್ರಮ ಮಾಡಲು ಮುಂದಾದಂತೆ ಕಾಣುತ್ತಿದೆ. ಅಕ್ರಮ ಗಣಿಗಾರಿಕೆಯಲ್ಲಿ ಪೊಲೀಸ್,ಅರಣ್ಯ,ಕಂದಾಯ ಪರಿಸರ ಇಲಾಖೆಗಳು ಶಾಮೀಲಾಗಿವೆ ಎಂದು ಆರೋಪಿಸಿದರು.

ಗಣಿಗಾರಿಕೆ ನಡೆಸಲು ಅದರದ್ದೇ ಆದ ನಿಯಮಗಳಿವೆ.ಅವುಗಳ ಪ್ರಕಾರವೇ ಗಣಿಗಾರಿಕೆಗೆ ಅವಕಾಶ ನೀಡಬೇಕು. ರೈತರಿಗೊಂದು ನ್ಯಾಯ,ಗಣಿ ಮಾಲೀಕರಿಗೆ ಒಂದು ನ್ಯಾಯವಲ್ಲ, ಈ ವಿಚಾರದಲ್ಲಿ ಡಿಸಿಯವರಿಗೆ ಭೇಟಿಯಾಗಿ ಮನವಿ ಸಲ್ಲಿಸುತ್ತೇವೆ.ಅಲ್ಲದೆ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ಸಮಸ್ಯೆಯನ್ನು ಮನವರಿಕೆ ಮಾಡಿಕೊಡುವ ಕೆಲಸ ಮಾಡಲಾಗುವುದು.2014 ರಲ್ಲಿ ತುಮಕೂರು ನಗರದ ವಸಂತನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಬಹಳ ವಿಜೃಂಭಣೆಯಿಂದ ಪುಡ್‌ಪಾರ್ಕ್ ಆರಂಭ ಮಾಡಲಾಯಿತು. ಆರಂಭವಾದ ಒಂದೇ ವರ್ಷಕ್ಕೆ ಮುಚ್ಚಿ, 100 ಎಕರೆ ಜಾಗವನ್ನು ಸಣ್ಣ ಸಣ್ಣ ತುಂಡು ಮಾಡಿ, ಮಾರಾಟ ಮಾಡಲಾಗಿದೆ.ಸ್ವತಹಃ ಪ್ರಧಾನ ಮಂತ್ರಿ,ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿಯೇ ಇತಂಹ ಹಗಲು ದರೋಡೆ ನಡೆದರೂ ಇದುವರೆಗೂ ಯಾರ ವಿರುದ್ದವೂ ಕ್ರಮವಿಲ್ಲ.ವಿರೋಧ ಪಕ್ಷ ಸಹ ಸಂಪೂರ್ಣ ನಿಷ್ಕ್ರೀಯವಾಗಿದೆ ಎಂದು ಕೋಡಿಹಳ್ಳಿ ಚಂದ್ರಶೇಖರ್ ವಿಷಾದ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ಜಿಲ್ಲಾಧ್ಯಕ್ಷ ಧನಂಜಯ ಆರಾಧ್ಯ ಮಾತನಾಡಿ,ತುರುವೇಕೆರೆ ತಾಲೂಕು ಕೋಳಗಟ್ಟ ಗ್ರಾಮದ ಸರ್ವೆ ನಂಬರ್ 65 ರಲ್ಲಿ ರಾಜೀವ್ ಎಂಬ ವ್ಯಕ್ತಿ 2 ಎಕರೆ ಜಾಗವನ್ನು ಕ್ರಷರ್‌ಗೆ ಲೀಸ್ ಪಡೆದು, ಅಕ್ಕಪಕ್ಕದಲ್ಲಿದ್ದ ಸುಮಾರು 08 ಎಕರೆ ಸರಕಾರಿ ಗೋಮಾಳ, ಅರಣ್ಯ ಇಲಾಖೆಯ ಜಾಗವನ್ನು ಒತ್ತುವರಿ ಮಾಡಿ ಅಕ್ರಮ ಗಣಿಗಾರಿಕೆ ನಡೆಸುತ್ತಿದ್ದಾರೆ.ಗಣಿಗಾರಿಕೆಯಿಂದ ಧೂಳಿನ ಕಣಗಳು ತೆಂಗು ಮತ್ತು ಅಡಿಕೆ ಇನ್ನಿತರ ಆಹಾರ ಬೆಳೆಗಳ ಮೇಲೆ ಕುಳಿತು, ಇಡೀ ಬೆಳೆ ನಾಶವಾಗುತ್ತಿದೆ. ಈ ಬಗ್ಗೆ ಹಲವಾರು ಬಾರಿ ಮನವಿ ನೀಡಿದ್ದರೂ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಜಿಲ್ಲಾಡಳಿತ ಮತ್ತು ಅಕ್ರಮ ಗಣಿಗಾರಿಕೆ ವಿರುದ್ದ ಮೇ.05 ರಿಂದ ಗ್ರಾಮದಲ್ಲಿ ಆಹೋರಾತ್ರಿ ಧರಣಿ ನಡೆದಿದೆ. ಆದರೆ ಗಣಿಮಾಲೀಕರು ಪ್ರತಿಭಟನಾ ನಿರತರ ಮೇಲೆ ಹಲ್ಲೆ ನಡೆಸಿ, ಅವರ ವಿರುದ್ದವೇ ಕೇಸು ದಾಖಲು ಮಾಡಿ,ಇನ್ನಿಲ್ಲದ ಕಿರುಕುಳ ನೀಡುತ್ತಿದ್ದಾರೆ. ಅಲ್ಲದೆ ನನ್ನಗೂ ದೂರವಾಣಿ ಕೆರೆ ಮಾಡಿ, ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಧನಂಜಯ ಆರಾಧ್ಯ ಆಗ್ರಹಿಸಿದರು.

ಈ ಸಂಬಂಧ ಮನವಿಯನ್ನು ಅಪರ ಜಿಲ್ಲಾಧಿಕಾರಿಗಳ ಡಾ.ಎಸ್.ತಿಪ್ಪೇಸ್ವಾಮಿ ಅವರಿಗೆ ಸಲ್ಲಿಸಿದರು. ಈ ವೇಳೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಭೈರೇಗೌಡ, ತುರುವೇಕೆರೆ ತಾಲೂಕು ಅಧ್ಯಕ್ಷ ಗಂಗಾಧರಪ್ಪ, ಚಿಕ್ಕನಾಯಕನಹಳ್ಳಿ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ್,ತುಮಕೂರು ಜಿಲ್ಲಾ ಮಹಿಳಾ ಘಟಕದ ಶಶಿಕಲ, ಗುಬ್ಬಿ ಮಹಿಳಾ ಘಟಕದ ಎಸ್.ಕಲ್ಪನಾ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಜಿಲ್ಲಾ ಪ್ರವಾಸ

ತುಮಕೂರು: ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ: ಪುರುಷೋತ್ತಮ ಬಿಳಿಮಲೆ ಅವರು ಮೇ 20ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.



ಅಂದು ಬೆಳಿಗ್ಗೆ 10 ಗಂಟೆಗೆ ತುಮಕೂರು ಜಿಲ್ಲಾ ಕನ್ನಡ ಪರ ಸಂಘಟನೆ ಹಾಗೂ ಹೋರಾಟಗಾರರೊಂದಿಗೆ ಸಭೆ, 11.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ

ನಡೆಸುವರು. ನಂತರ ಮಧ್ಯಾಹ್ನ 3 ಗಂಟೆಗೆ ತುಮಕೂರು ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಸಂಜೆ 5.30 ಗಂಟೆಗೆ ಬೆಂಗಳೂರಿಗೆ ತೆರಳುವರು.

### ಪತ್ರಿಕಾಗೋಷ್ಠಿಯಲ್ಲಿ ಭಾರತೀಯ ಸೇನೆಯನ್ನು ಅಭಿನಂದಿಸಿದ ಆಪ್ ನಾಯಕರು

## ವಿದೇಶಿ ಶಕ್ತಿಗಳು ಊಹಿಸಲಾಗದಷ್ಟು ಎದಿರೇಟು ನೀಡುತ್ತಿರುವ ಸೈನಿಕರು



ತುಮಕೂರು: ಕಾಶ್ಮೀರದಲ್ಲಿ ನಡೆದ ಪ್ರವಾಸಿಗರ ಹತ್ಯೆಗೆ ಪ್ರತೀಕಾರಾಗಿ ಭಾರತದ ಸೈನ್ಯ ಆಪರೇಷನ್ ಸಿಂಧೂರ ಯಶಸ್ವಿಯಾಗಿ ನಡೆಸಿ,ಪಾಕಿಸ್ತಾನದ ಉಗ್ರರನ್ನು ಮತ್ತು ಉಗ್ರರ ನೆಲೆಗಳನ್ನು ನಾಶಪಡಿಸಿ ಮತ್ತು ಪಾಕಿಸ್ಥಾನದ ಸೈನಿಕರನ್ನು ಸಹ ಹಿಮ್ಮೆಟ್ಟಿಸಿ ಭಾರತದ ಸಾರ್ವಭೌಮತೆಯನ್ನು ಯಾವ ವಿದೇಶಿ ಶಕ್ತಿಗಳು ಊಹಿಸಿಲಾಗದಂತೆ ಉತ್ತರವನ್ನು ಸಮರ್ಪಕ ಹೋರಾಟದ ಮೂಲಕ ತೋರಿಸಿಕೊಟ್ಟಿದ್ದಾರೆ.ಇದಕ್ಕಾಗಿ ಭಾರತೀಯ ಸೇನೆಗೆ ಅಭಿನಂದನೆ ಸಲ್ಲಿಸುವುದಾಗಿ ಅಮ್ ಆದ್ಮಿ ಪಾರ್ಟಿಯ ತುಮಕೂರು ಜಿಲ್ಲಾಧ್ಯಕ್ಷ ಜಯರಾಮಯ್ಯ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು,ಅಪರೇಷನ್ ಸಿಂಧೂರ್ ಹೆಸರಿನಲ್ಲಿ ಭಾರತೀಯ ಸೇನೆ ಉಗ್ರರ ನೆಲೆಗಳನ್ನು ಧ್ವಂಸಗೊಳಿಸುವ ಮೂಲಕ ಪ್ರತ್ಯುತ್ತರ ನೀಡಿ ಉಗ್ರರ ದಾಳಿಯಲ್ಲಿ ಮಡಿದ ಜನರ ಆತ್ಮಕ್ಕೆ ಶಾಂತಿ ದೊರಕಿಸಿದೆ.ಅಲ್ಲದೆ ಈ ಘಟನೆ ಉಗ್ರವಾದವನ್ನು ಬೆಂಬಲಿಸುವ ಎಲ್ಲರಿಗೂ ಎಚ್ಚರಿಕೆಯ ಗಂಟೆಯಾಗಿದೆ ಎಂದರು.

ನಮ್ಮ ದೇಶದ ಮೂರು ಪ್ರಮುಖ ಶಕ್ತಿಗಳಾದ ರೈತರು,ಸೈನಿಕರು ಮತ್ತು ಶ್ರಮಿಕ ವರ್ಗ ಸೇರಿದಂತೆ ಎಲ್ಲಾ ಕಾರ್ಮಿಕರು ದೇಶದ ಬೆನ್ನೆಲುಬುಗಳು.ಸೈನಿಕರು ದೇಶದ ಗಡಿ ಕಾಯ್ದರೆ,ರೈತರ ಅನ್ನ ಬೆಳೆದು ನೀಡಿ ದೇಶವನ್ನು ಸಂರಕ್ಷಿಸುತ್ತಾರೆ.ಹಾಗೆಯೇ ಕಾರ್ಮಿಕರು ದುಡಿಯುವ ಮೂಲಕ ದೇಶದ ಅರ್ಥಿಕ ಬೆಳವಣಿಗೆಗೆ ಕಾರಣರಾಗಿದ್ದಾರೆ. ಹಾಗಾಗಿ ಈ ಮೂರು ವರ್ಗಗಳಿಗೆ ಹೆಚ್ಚಿನ ಸೌಲಭ್ಯಗಳನ್ನು ರಾಜ್ಯ ಮತ್ತು ಕೇಂದ್ರ ಸರಕಾರಗಳು ನೀಡಬೇಕೆಂದು ಆಮ್ ಆದ್ಮ ಪಾರ್ಟಿಯ ಒತ್ತಾಯವಾಗಿದೆ ಎಂದು ತುಮಕೂರು ಜಿಲ್ಲಾಧ್ಯಕ್ಷರಾದ ಹೆಚ್ ಎ ಜಯರಾಮಯ್ಯ ತಿಳಿಸಿದರು.

ಪೆಹಲ್ಗಾಮ್ ಗ್ರಾಮದಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯ ಕುರಿತು ಹಲವು ಪ್ರಶ್ನೆಗಳಿದ್ದರೂ ಅವುಗಳನ್ನು ಕೇಳಲು ಇದು ಸುಸಮಯವಲ್ಲ.ಈಗ ಒಗ್ಗಟ್ಟು ಮುಖ್ಯ.ಜೊತೆಗೆ ಸೈನಿಕರಿಗೆ ನೈತಿಕ ಬೆಂಬಲ ನೀಡುವ ಅಗತ್ಯವಿದೆ. ಹಾಗಾಗಿ ಭಾರತೀಯ ಸೈನಿಕರ ಧೈರ್ಯ ಮತ್ತು ಸಾಹಸವನ್ನು ಅಮ್‌ಆದ್ಮಿ ಪಕ್ಷ ಸದಾ ಸ್ಮರಿಸುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿ ಎನ್ ರಾಮಾಂಜನಪ್ಪ, ರೈತ ಘಟಕದ ಬಿ.ಆರ್ ಯೋಗೇಶ್ ಕರಿಗೌಡ, ಮಾಧ್ಯಮ ಉಸ್ತುವಾರಿಗಳಾದ ಪ್ರಭುಸ್ವಾಮಿ, ಮಂಡಿಗ್ರಾದ ಪ್ರಕಾಶ್,ತಿಮ್ಮಪ್ಪ,ಹೆಚ್.ಬಿ.ಶಿವಲಿಂಗಯ್ಯ, ನಾಗಭೂಷಣ್, ಕೆಂಪನಹಳ್ಳಿ ಕುಮಾರ್, ಬಸವರಾಜು, ಚರಣ್ ಮತ್ತಿತರರು ಉಪಸ್ಥಿತರಿದ್ದರು.

## ಒಳಮೀಸಲಾತಿ ಜಾತಿಗಣತಿ ಸಮೀಕ್ಷೆ ಅವಧಿ ವಿಸ್ತರಿಸಲು ಛಲವಾದಿ ಸಂಘ ಮನವಿ



ಕೊರಟಗೆರೆ: ರಾಜ್ಯ ಸರ್ಕಾರವು ನಡೆಸುತ್ತಿರುವ ಒಳಮೀಸಲಾತಿ ಜಾತಿಗಣತಿ ಸಮೀಕ್ಷೆಯ ಅವಧಿಯನ್ನು ವಿಸ್ತರಿಸುವಂತೆ ಕೊರಟಗೆರೆ ತಾಲ್ಲೂಕು ಛಲವಾದಿ ಮಹಾಸಭಾ ಉಪಾಧ್ಯಕ್ಷ ಹನುಮಂತರಾಯಪ್ಪ ಸರ್ಕಾರವನ್ನು ಮನವಿ ಮಾಡಿದ್ದಾರೆ.

ಅವರು ತಾಲ್ಲೂಕಿನ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಈಗಾಗಲೇ ನ್ಯಾಯಮೂರ್ತಿಗಳಾದ ಎಚ್.ಎನ್.ನಾಗ್ ಮೋಹನ್ದಾಸ್ ರವರ ತೀರ್ಪಿನಂತೆ ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಒಳಮೀಸಲಾತಿ ಜಾತಿ ಗಣತಿ ಪ್ರಾರಂಭಿಸಿದ್ದು ಛಲವಾದಿ ಮಹಾಸಭಾ ಇದನ್ನು ಸ್ವಾಗತಿಸಿ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತದೆ, ಆದರೆ ಈ ಜಾತಿಗಣತಿಯಲ್ಲಿ ಹಲವಾರು ತಾಂತ್ರಿಕ ದೋಷಗಳು ಬರುತ್ತಿವೆ ಸರ್ಕಾರವು ಈ ಜನಗಣತಿಗೆ ಇದೇ ಮೇ ತಿಂಗಳ 17 ನೇ ತಾರೀಖು ಅಂತಿಮ ದಿನಾಂಕ ನಿಗದಿಪಡಿಸಿದ್ದು ಇದರಿಂದ ತಾಂತ್ರಿಕ ದೋಷದಿಂದ ನಡೆಯುತ್ತಿರುವ ಜಾತಿಗಣತಿ ನಿಖರವಾಗಿ ಮತ್ತು ಗುಣಮಟ್ಟವಾಗಿ ಆಗದ ಕಾರಣ ಸರ್ಕಾರ ಇದರ ಕಾಲಮಿತಿಯನ್ನು ವಿಸ್ತರಿಸಬೇಕು ಎಂದ ಅವರು ಛಲವಾದಿಗಳು ಜಾತಿ ಗಣತಿ ಸಮಯದಲ್ಲಿ ಆದಿದ್ರಾವಿಡ ಎಂದು ಬರೆಸಿ ಬ್ರಾಕೆಟ್ ನಲ್ಲಿ ಛಲವಾದಿ ಎಂದು ಬರೆಸಬೇಕು ಎಂದು ಮನವಿ ಮಾಡಿದರು,

ಜಿಲ್ಲಾ ದಲಿತ ಸೇನೆ ಅದ್ಯಕ್ಷ ಅನಂತ್‌ಕುಮಾರ್ ಮಾತನಾಡಿ ಕೊರಟಗೆರೆ ತಾಲ್ಲೂಕು ಸೇರಿದಂತೆ ಈ ರಾಜ್ಯದಲ್ಲಿ ಒಳಮೀಸಲಾತಿ ಜಾತಿಗಣತಿ ಸರಿಯಾಗಿ ಆಗದಾಗಿದೆ ಒಳಮೀಸಲಾತಿ ಬರುವ ಎಲ್ಲಾ ಜಾತಿಗಳ ಜನರು ಕಡುಬಡವರಾಗಿದ್ದು ದಿನವೂ ಕೂಲಿಗೆ ಊರಿನಿಂದ ಹೊರಗೆ ಹೋಗುತ್ತಾರೆ, ಜಾತಿಗಣತಿಗೆ ಬರುವ ಸಂಪನ್ಮೂಲ ವ್ಯಕ್ತಿಗಳಿಗೆ ಮೊಬೈಲ್ ಸರ್ವರ್‌ಗಳದೆ ತೊಂದರೆಯಾಗಿದೆ ಕೆಲವೊಮ್ಮೆ ದಿನಪೂರ್ತಿ ಸರ್ವಗಳೇ ಬರುವುದಿಲ್ಲ ಇದರಿಂದ ಜಾತಿಗಣತಿಗೆ ಬರುವ ಅಧಿಕಾರಿಗಳು ಮನೆ ಮನೆಗೆ ಹೋಗಲು ಹಾಗದೆ ಸರ್ಕಾರ ನೀಡಿರುವ ಸಮಯದಲ್ಲಿ ಕೆಲಸ ಮುಗಿಸಲು ಆಗದೆ ಜಾತಿ ಗಣತಿ ಪರಿಪೂರ್ಣವಾಗದೆ ಗುಣ ಮಟ್ಟದಲ್ಲಿ ಆಗದೆ ಎಲ್ಲವೂ ಅಪೂರ್ಣವಾಗಲಿದ್ದು ಸರ್ಕಾರವು ಇದರ ಅವಧಿ ದಿನಗಳನ್ನು ವಿಸ್ತಾರ ಮಾಡಬೇಕು ಎಂದರು.

ತಾಲ್ಲೂಕು ಪ್ರದಾನ ಕಾರ್ಯದರ್ಶಿ ಪುಟ್ಟರಾಜು ಮಾತನಾಡಿದರು. ಗೋಷ್ಟಿಯಲ್ಲಿ ಛಲವಾದಿ ಮಹಾಸಭಾದ ಪದಾಧಿಕಾರಿಗಳಾದ ಸೋಮಶೇಖರ್, ಪುಟ್ಟರಾಜು, ಹೊನ್ನೇಶ್, ಹನುಮಂತರಾಜು, ದೇವರಾಜು, ರಮೇಶ್, ನರಸಪ್ಪ, ಶ್ರೀನಿವಾಸ್, ನರಸಿಂಹಮೂರ್ತಿ, ಕಾಂತರಾಜ್, ವಿನಯ್, ಶ್ರೀನಿವಾಸ್‌ಯ್ಯ, ನರಸಿಂಹಮೂರ್ತಿ ಸೇರಿದಂತೆ ಛಲವಾದಿ ಬಂಧುಗಳು ಹಾಜರಿದ್ದರು.

## ‘ಬಿ–ಖಾತಾ ಆಂದೋಲನ ಪ್ರಕ್ರಿಯೆ ಮತ್ತಷ್ಟು ಸರಳಗೊಳಿಸಿ’

### ಆಸ್ತಿ ಮಾಲೀಕರಲ್ಲಿರುವ ಗೊಂದಲ ನಿವಾರಿಸಲು ಇಕ್ಬಾಲ್ ಅಹ್ಮದ್ ಮನವಿ



ತುಮಕೂರು: ಸಮರ್ಪಕ ದಾಖಲೆಗಳಿಲ್ಲದ ಆಸ್ತಿಗಳನ್ನು ಬಿ–ಖಾತೆ ಮಾಡಿಕೊಡುವ ಮೂಲಕ ಆಸ್ತಿಯ ಮಾಲಿತ್ವವನ್ನು ಅಧಿಕೃತಗೊಳಿಸುವ ಸರ್ಕಾರದ ಕ್ರಮ ಸ್ವಾಗತಾರ್ಹ. ಬಿ–ಖಾತಾ ಮಾಡಿಸಿಕೊಳ್ಳುವ ಪ್ರಕ್ರಿಯನ್ನು ಮತ್ತಷ್ಟು ಸರಳಗೊಳಿಸಿ, ಎದುರಾಗಿರುವ ಗೊಂದಲಗಳನ್ನು ನಿವಾರಿಸಿ ಸಾಮಾನ್ಯ ಆಸ್ತಿ ಮಾಲೀಕರು ಸುಲಭವಾಗಿ ಬಿ–ಖಾತೆ ಮಾಡಿಸಿಕೊಳ್ಳಲು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಜನರಿಗೆ ಸಮರ್ಪಕ ಮಾಹಿತಿ, ಮಾರ್ಗದರ್ಶನ ನೀಡಬೇಕು ಎಂದು ನಗರದ ಕಾಂಗ್ರೆಸ್ ಮುಖಂಡ ಇಕ್ಬಾಲ್ ಅಹ್ಮದ್ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಬಿ–ಖಾತೆ ಮಾಡಿಸಿಕೊಳ್ಳುವ ಕಾರ್ಯದಲ್ಲಿ ಅನಗತ್ಯ ಗೊಂದಲ, ಆತಂಕ ಉಂಟು ಮಾಡುವವರ ವಿರುದ್ಧ ಅಧಿಕಾರಿಗಳು ಕ್ರಮ ತೆಗೆದುಕೊಳ್ಳಬೇಕು. ಬಿ–ಖಾತಾಗೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನುಸರಿಸುವಂತಹ ಕ್ರಮಗಳನ್ನು ನಗರಪಾಲಿಕೆ ವ್ಯಾಪ್ತಿಯ ಆಸ್ತಿ ನೋಂದಣಿಗೂ ಅನ್ವಯವಾ ಗುವಂತೆ ಕ್ರಮ ತೆಗೆದುಕೊಳ್ಳಲು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರಿಗೆ ಮನವಿ ಮಾಡಿದ್ದಾರೆ.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಯಾವುದೇ ಪರವಾನಗಿ, ಭೂಪರಿವರ್ತನೆ ಮಾಡಿಸಿಕೊಳ್ಳದೆ ನಕ್ಷೆ ಮಂಜೂರಾತಿ ಮಾಡಿಕೊಳ್ಳದೆ ಕಂದಾಯ ನಿವೇಶನಗಳಲ್ಲಿ ಕಟ್ಟಡಗಳನ್ನು ಕಟ್ಟಿಕೊಂಡಿದ್ದರೆ ಅಂತಹ ಆಸ್ತಿ ಮಾಲೀಕರಿಗೆ ಅನುಕೂಲ ಮಾಡಿಕೊಡಲು ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಬಿ–ಖಾತಾ ನೀಡಿ ಸಕ್ರಮಗೊಳಿಸುವ ನಿರ್ಧಾರ ತೆಗೆದುಕೊಂಡಿರುವುದು ಸ್ವಾಗತಾರ್ಹ. ನಗರಸಭೆ, ಪುರಸಭೆ, ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಪೌರಾಡಳಿತ ಇಲಾಖೆ ಸೂಚಿಸಿರುವ ಮಾರ್ಗಸೂಚಿ ಗಳನ್ನು ನಗರಪಾಲಿಕೆ ವ್ಯಾಪ್ತಿಯ ಆಸ್ತಿಗಳಿಗೂ ಅನ್ವಯ ವಾಗುವಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ಇಕ್ಬಲ್ ಆಹ್ಮದ್ ಕೋರಿದ್ದಾರೆ. ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತು ಮಾಡುವ ನೋಂದಾಯಿತ ಮಾರಾಟ ಪತ್ರಗಳು, ದಾನ ಪತ್ರ, ವಿಭಾಗ ಪತ್ರಗಳು ಅಥವಾ ಸರ್ಕಾರದ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕು ಪತ್ರ, ಮಂಜೂರಾತಿ ಪತ್ರಗಳ ಆಧಾರದಲ್ಲಿ ಬಿ–ಖಾತೆ ನೀಡಿ ಆಸ್ತಿ ಮಾಲಿತ್ವ ನೀಡಲು ಕ್ರಮ ತೆಗೆದುಕೊಳ್ಳಲಾಗುತ್ತದೆ. ಬಿ–ಖಾತಾ ನೀಡುವ ಅವಧಿಯನ್ನು ಸರ್ಕಾರ ಮೂರು ತಿಂಗಳ ಅವಧಿಗೆ ವಿಸ್ತರಿಸಲಾಗಿದೆ, ಬರುವ ಆಗಸ್ಟ್ 10ರವರೆಗೆ ಬಿ–ಖಾತೆ ಪಡೆಯಬಹುದಾಗಿದ್ದು ಇದರಿಂದ ಬಡವರಿಗೆ ಅನುಕೂಲವಾಗುತ್ತದೆ. ತುಮಕೂರು ನಗರಪಾಲಿಕೆ ವ್ಯಾಪ್ತಿಯಲ್ಲಿ ಬಿ–ಖಾತೆ ನೀಡುವ ಕಾರ್ಯವನ್ನು ಮತ್ತಷ್ಟು ಸರಳಗೊಳಿಸಿ, ಸುಲಭಗೊಳಿಸಬೇಕು. ಖಾತೆ ಪಡೆಯಲು ಬರುವವರಿಗೆ ಸರಿಯಾದ ಮಾರ್ಗದರ್ಶನ ನೀಡಲು ಕಚೇರಿಯಲ್ಲಿ ಪ್ರತ್ಯೇಕ ವಿಭಾಗದ ವ್ಯವಸ್ಥೆ ಮಾಡಬೇಕು. ದಾರಿ ತಪ್ಪಿಸುವಂತಹ ಮಧ್ಯವರ್ತಿಗಳ ಹಾವಳಿ ತಪ್ಪಿಸಬೇಕು. ಸಾರ್ವಜನಿಕರಿಗೆ ಒಂದೇ ಸುತ್ತಿನಲ್ಲಿ ಎಲ್ಲಾ ಮಾಹಿತಿ ನೀಡಬೇಕು, ಪದೇಪದೆ ಕಚೇರಿಗೆ ಅಲೆದಾಡಿಸುವುದನ್ನು ತಪ್ಪಿಸಬೇಕು. ಬಿ–ಖಾತಾ ಸಂಬಂಧ ತುಮಕೂರು ನಗರಪಾಲಿಕೆ ನಗರದಲ್ಲಿ ಮತ್ತೊಂದು ಸುತ್ತಿನ ಜನಜಾಗೃತಿ ಆಂದೋಲನ ಮಾಡಿ ಜನರಲ್ಲಿ ಅರಿವು ಮೂಡಿಸಬೇಕು ಎಂದು ಇಕ್ಬಾಲ್ ಅಹ್ಮದ್ ಕೋರಿದ್ದಾರೆ.

## ಮೇ 18ರಂದು ಖಾತೆದಾರರಿಗೆ ಭೂ ಪರಿಹಾರ ನೀಡಲು ಡೀಸಿ ಸೂಚನೆ



*ತುಮಕೂರು: ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ ತಿಪಟೂರು ಉಪವಿಭಾಗಾಧಿಕಾರಿ, ವಿಶೇಷ ಭೂ ಸ್ವಾಧೀನಾಧಿಕಾರಿ ಹಾಗೂ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್ ಅವರು ಮೇ 18ರಂದು ಜಂಟಿಯಾಗಿ ಕ್ಯಾಂಪ್ ನಡೆಸಿ ಖಾತೆದಾರರಿಗೆ ಭೂ ಪರಿಹಾರವನ್ನು ಪಾವತಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.*

ಜಿಲ್ಲಾಧಿಕಾರಿಗಳ ಕಚೇರಿ ನ್ಯಾಯಿಕ ಸಭಾಂಗಣದಲ್ಲಿ ಗುರುವಾರ ಭೂಸ್ವಾಧೀನ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಭದ್ರಾ ಮೇಲ್ದಂಡೆ ಯೋಜನೆಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕು ಬೆಳ್ಳಾರ, ತಿಮ್ಲಾಪುರ, ಹುಲ್ಲೇನಹಳ್ಳಿ, ಕಲ್ಲಹಳ್ಳಿ, ಡಿಂಕನಹಳ್ಳಿ, ಮೋಟಿಹಳ್ಳಿ ಹಾಗೂ ತಿಮ್ಮನಹಳ್ಳಿ ಗ್ರಾಮಗಳ 226 ಭೂ ಮಾಲೀಕರಿಗೆ ಮೇ 18ರಂದು ಭೂ ಪರಿಹಾರ ಪಾವತಿಸಬೇಕು. ಅಂದಾಜು 20 ಕೋಟಿ ರೂ.ಗಳಷ್ಟು ಭೂ ಪರಿಹಾರ ಪಾವತಿಸಲು ಬಾಕಿಯಿದ್ದು, ಭೂ ಮಾಲೀಕರಿಂದ ಅಗತ್ಯ ದಾಖಲೆಗಳನ್ನು ಪಡೆದು ಪರಿಹಾರ ಹಣವನ್ನು ಪಾವತಿಸಲು ಕ್ರಮಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಬೈರಲಿಂಗನಹಳ್ಳಿ ಹಾಗೂ ಕೇಶವಾಪುರದಲ್ಲಿ ತೋಟಗಾರಿಕೆ ಹಾಗೂ ಅರಣ್ಯ ಇಲಾಖೆಯಿಂದ ಈವರೆಗೂ ಮರ ಮತ್ತು ಮಾಲ್ಕಿ ಮೌಲ್ಯ ನಿರ್ಧರಣೆ ಮಾಡದೇ ಇರುವುದರಿಂದ ಭೂಸ್ವಾಧೀನ ಪ್ರಕ್ರಿಯೆ ಬಾಕಿ ಉಳಿದುಕೊಂಡಿದೆ. ಈ ನಿಟ್ಟಿನಲ್ಲಿ ಅರಣ್ಯ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಕೂಡಲೇ ಸದರಿ ಗ್ರಾಮಗಳ ಮರ ಮತ್ತು ಮಾಲ್ಕಿ ಮೌಲ್ಯ ನಿರ್ಧರಣೆ ಮಾಡಿ ವರದಿ ಸಲ್ಲಿಸಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಹೇಮಾವತಿ, ಭದ್ರಾ ಮೇಲ್ದಂಡೆ, ಎತ್ತಿನಹೊಳೆ, ರೈಲ್ವೆ ಯೋಜನೆಗಳ ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಲು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆ ಗಳು ಈವರೆಗೂ ಅನುಮೋದನೆಯಾಗದಿದ್ದಲ್ಲಿ ತಮ್ಮ ಗಮನಕ್ಕೆ ತರಬೇಕು ಎಂದು ಸೂಚನೆ ನೀಡಿದರು.

ಎತ್ತಿನ ಹೊಳೆ ಯೋಜನೆಗಾಗಿ ತಿಪಟೂರು ತಾಲ್ಲೂಕು ಚೌಡ್ಲಾಪುರ ಗ್ರಾಮದಲ್ಲಿ 60 ಎಕರೆ ಪ್ರದೇಶವನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಅನುಮೋದನೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕೆಂದು ಸೂಚನೆ ನೀಡಿದರು.

ತುಮಕೂರು ನಗರದ ಬೈಪಾಸ್ ರಸ್ತೆಯಲ್ಲಿರುವ ಗೌರಿಪುರ ಹಾಗೂ ಭೈರಸಂದ್ರ ಗ್ರಾಮದ ಬಳಿ ಬೌಂಡರಿ ಕಲ್ಲು ಸಮಸ್ಯೆ ಇರುವುದರಿಂದ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗೆ ಅಡ್ಡಿಯಾಗಿದೆ. ಕೂಡಲೇ ಸಮಸ್ಯೆಯನ್ನು ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ವಿವಿಧ ಯೋಜನೆಗಳ ವಿಶೇಷ ಭೂಸ್ವಾಧೀನಾಧಿಕಾರಿಗಳು ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಗ್ರಾಮ ಆಡಳಿತ ಅಧಿಕಾರಿ ನೇಮಕಾತಿ: ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ತುಮಕೂರು: ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿಯಿದ್ದ ಗ್ರಾಮ ಆಡಳಿತ ಅಧಿಕಾರಿಗಳ ನೇಮಕಾತಿಗೆ ಸಂಬಂಧಿಸಿದಂತೆ, ತೃತೀಯ ಲಿಂಗಿ ಮೀಸಲಾತಿಯಡಿ 1:3 ಅನುಪಾತದನ್ವಯ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕ ಹಾಗೂ ಅಧಿಕೃತ ವೆಬ್‌ಸೈಟ್ www.tumkur. nic.in ನಲ್ಲಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಪಟ್ಟಿಯನುಸಾರ ತೃತೀಯ ಲಿಂಗಿ ಮೀಸಲಾತಿಯಡಿ ಪುಟ್ಟನರಸಮ್ಮ ಎನ್., ಹರ್ಷಿತ ಡಿ.ಹೆಚ್. ಹಾಗೂ ಆಶಾ ಎಸ್.ಎನ್. ಅವರು ಆಯ್ಕೆಯಾಗಿದ್ದು, ಆಯ್ಕೆಯಾಗಿರುವ ಅಭ್ಯರ್ಥಿಗಳು ಮಾತ್ರ ಮೇ 19ರಂದು ಸಂಜೆ 5:30ರೊಳಗಾಗಿ ತಮ್ಮ ಪಿಯುಸಿ/12ನೇ ತರಗತಿ ಅಂಕಪಟ್ಟಿ ಹಾಗೂ ಮೀಸಲಾತಿಗೆ ಸಂಬಂಧಿಸಿದ ಮೂಲ ಪ್ರಮಾಣಪತ್ರಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಪರಿಶೀಲನೆಗಾಗಿ ಹಾಜರಾಗಬೇಕೆಂದು ತಿಳಿಸಿದ್ದಾರೆ.

## ದ್ವಿಚಕ್ರ ವಾಹನ ಖದೀಮನ ಬಂಧನ:

### 11.23 ಲಕ್ಷ ಮೌಲ್ಯದ 30 ವಾಹನಗಳ ಪತ್ತೆ

ತುಮಕೂರು: ಇಲ್ಲಿನ ಹೊಸ ಬಡಾವಣೆ ಪೊಲೀಸರು ದ್ವಿಚಕ್ರ ವಾಹನ ಕಳ್ಳತನ ಮಾಡುತ್ತಿದ್ದ ಆರೋಪಿಯೊಬ್ಬನನ್ನು ಬಂಧಿಸಿ ಆತನಿಂದ 11,23,390 ರೂ. ಬೆಲೆಯ ಒಟ್ಟು 30 ವಿವಿಧ ಮಾದರಿಯ ದ್ವಿಚಕ್ರ ವಾಹನಗಳನ್ನು ಪತ್ತೆಹಚ್ಚಿ ವಶಪಡಿಸಿಕೊಂಡಿದ್ದಾರೆ.

ಬೆಂಗಳೂರಿನ ವೈಟ್‌ಫೀಲ್ಡ್ ರಸ್ತೆಯ ಹಿಮ್ಮೇಮಳ್ಳಿ ವಾಸಿ ಚಿತ್ತಪ್ಪ ಗಾರಿ ಆನಂದ್ (32 ವರ್ಷ) ಎಂಬಾತನೇ ಬಂಧಿತನಾಗಿರುವ ಆರೋಪಿ. ಈತ ನೀಡಿದ ಮಾಹಿತಿ ಮೇರೆಗೆ ಹೊಸ ಬಡಾವಣೆ ಪಿಎಸ್ಐಗಳಾದ ಚೇತನ್‌ಕುಮಾರ್, ಮಂಗಳಮ್ಮ ಮತ್ತು ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಹಲವೆಡೆ ಕಳ್ಳತನ ಮಾಡಿದ್ದ ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ., ಎಎಸ್ಪಿಗಳಾದ ಪುರುಷೋತ್ತಮ್, ಗೋಪಾಲ್ ಡಿವೈಎಸ್ಪಿ ಚಂದ್ರಶೇಖರ್ ಮೇಲ್ಕಂಡ ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

## ಬೆಳ್ಳಂಬೆಳಗ್ಗೆ ಲೋಕಾಯುಕ್ತ ದಾಳಿ

ತುಮಕೂರು: ನಗರದ ಹೊರವಲಯದ ಪಂಡಿತನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ರಾಜಶೇಖರ್ ಮನೆ ಮೇಲೆ ತುಮಕೂರು ಲೋಕಾಯುಕ್ತ ಪೊಲೀಸರು ದಾಳಿ ನಡೆಸಿರುವ ಘಟನೆ ನಡೆದಿದೆ.

ತಮ್ಮ ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಸಿದ್ದಾರೆಂಬ ಮಾಹಿತಿ ಮೇರೆಗೆ ತುಮಕೂರು ಲೋಕಾಯುಕ್ತ ಎಸ್ಪಿ ಲಕ್ಷ್ಮೀನಾರಾಯಣ್ ನೇತೃತ್ವದಲ್ಲಿ ಅಶೋಕ ನಗರ ದಲ್ಲಿರುವ ಮನೆ, ಎಸ್.ಎಸ್.ಪುರಂನಲ್ಲಿರುವ ಸಹೋದರನ ಮನೆ, ಬೆಂಗಳೂರಿನಲ್ಲಿರುವ ಮತ್ತೊಬ್ಬ ಸಹೋದರನ ಮನೆ ಮೇಲೆ ಬೆಳ್ಳಂಬೆಳಗ್ಗೆ ದಾಳಿ ನಡೆಸಿ ದಾಖಲಾತಿಗಳನ್ನು ಪರಿಶೀಲಿಸಿದರು.

ಹೆಚ್ಚಿನ ಮಾಹಿತಿಯನ್ನು ನಿರೀಕ್ಷಿಸಲಾಗುತ್ತಿದೆ.

# ಹಿರೇಮಠದಲ್ಲಿ ಧಾರ್ಮಿಕ ಕಾರ್ಯಕ್ರಮ

ತುಮಕೂರು: ನಗರದ ಹಿರೇಮಠ ದಲ್ಲಿ ಮೇ 23, 24, 25ರಂದು ಪುನಃ ಪ್ರತಿಷ್ಠಾಪನಾ ಕಾರ್ಯಕ್ರಮ ಮತ್ತು ವಿದ್ಯಾರ್ಥಿ ದಾಸೋಹಭವನ ಉದ್ಘಾಟನಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. 24 ಶನಿವಾರ ದಂದು ಶ್ರೀ ಮಲ್ಲಿಕಾರ್ಜುನಸ್ವಾಮಿ ಪುನಃ ಪ್ರತಿಷ್ಠಾಪನೆಗೆ ಪೂರಕವಾಗಿ ವೀರಶೈವ ಆಗಮಿಕರುಗಳ ಮತ್ತು ಪುರೋಹಿತರ ನೇತೃತ್ವದಲ್ಲಿ ವಿದಿವ ತಾಗಿ ಶಾಸ್ತ್ರೋಕ್ತ ಪೂರ್ವಭಾವಿ ಕಾರ್ಯಕ್ರಮಗಳು ನಡೆಯಲಿವೆ. ಮೇ25ರಂದು ಸ್ವಾಮಿಯ ಪುನಃ ಪ್ರತಿಷ್ಠಾಪನಾಕಾರ್ಯ, ನೇತ್ರೋ ಲನ, ಗೋಪುರ ಕಲಶಾರೋಹಣ, ಕುಂಭಾಭಿಷೇಕ, ಕಲಶಾ ರೋಹ, ಇತ್ಯಾದಿ ಕಾರ್ಯಕ್ರಮಗಳಿವೆ.

ಮೇ 25 ರಂದು ಮಠದ ಆವರಣದಲ್ಲಿ ಹೊಸ ದಾಗಿ ನಿರ್ಮಾಣಗೊಂಡ ವಿದ್ಯಾ ರ್ಥಿ ವಸತಿಗೃಹದ ಉದ್ಘಾಟನೆ. ಬೆಳಗಿನ 10 ಗಂಟೆಯಿಂದ 12.00 ಗಂಟೆಯ ವರೆಗೆ ಧಾರ್ಮಿಕ ಮಹಾಸಭೆ ಮತ್ತು ಆಶೀರ್ವಚನ ಕಾರ್ಯಕ್ರಮವಿದೆ.



ತುಮಕೂರಿನ ಕ್ಯಾತ್ಸಂದ್ರದ ಡಾ.ಪುನಿತ್ ರಾಜ್‌ಕುಮಾರ್ ಬಡಾವಣೆಯಲ್ಲಿ ನೂತನ ನಂದಿನಿ ಕ್ಷೀರ ಮಳಿಗೆಯನ್ನು ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷೆ ಶಾಂತಲಾ ರಾಜಣ್ಣ ಉದ್ಘಾಟಿಸಿದರು. ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ನಂಜೇಗೌಡ, ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸ್, ತಾಲ್ಲೂಕು ಪಂಚಾಯ್ತಿ ಮಾಜಿ ಅಧ್ಯಕ್ಷ ಕಲ್ಲಹಳ್ಳಿ ದೇವರಾಜು, ವಿವೇಕಾನಂದ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಪಿ.ಮೂರ್ತಿ, ಮುಖಂಡ ಕಾಂತರಾಜು, ಮಳಿಗೆ ಮಾಲೀಕ ಮಹೇಶ್ ಮೊದಲಾದವರು ಹಾಜರಿದ್ದರು.

# ಶ್ರೀ ಆಂಜನೇಯ ರಥೋತ್ಸವ

ಚೇಳೂರು: ತಾಳೆಕೊಪ್ಪದಲ್ಲಿ ಮೇ 15 ರಿಂದ ಮೇ 18 ರವರೆಗೆ ಶ್ರೀ ಆಂಜನೇಯ ಸ್ವಾಮಿ ಜಾತ್ರೋತ್ಸವ ನಡೆಯಲಿದೆ. ಮೇ 15 ರಿಂದ ವಿವಿ ಧ ಧಾರ್ಮಿಕ ವಿಧಿ ವಿಧಾನಗಳು ಜರುಗಲಿವೆ. ವಿಶೇಷವಾಗಿ ಮೇ 17 ರಂದು ಬೆಟ್ಟದಹಳ್ಳಿ ಗವಿಮ ಠದ ಚಂದ್ರಶೇಖರ ಸ್ವಾಮೀಜಿ, ಗೊಲ್ಲಹಳ್ಳಿಯ ವಿಭವವಿದ್ಯಾಶಂಕರ ಸ್ವಾಮೀಜಿ, ತೆವಡೆಹಳ್ಳಿ ಗೋಸಲ ಚನ್ನಬಸವೇಶ್ವರ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಶ್ರೀ ಆಂಜನೇಯ ಸ್ವಾಮಿಯ ಬ್ರಹ್ಮ ರಥೋತ್ಸವ ನಡೆಯುವುದು. ಮೇ 18 ರಂದು ಅಮೃತಸ್ನಾನ, ಒಕಳಿ, ರಾಜಬೀದಿ ಮೆರವಣಿಗೆ ನಡೆಯಲಿದ್ದು, ಭಕ್ತಾದಿ ಗಳಿಗೆ ದಾಸೋಹ ಏರ್ಪಡಿಸಲಾಗಿದೆ.

# ಕವಿತೆ ಕಟ್ಟುವುದಲ್ಲ, ನಮ್ಮೊಳಗೆ ಹುಟ್ಟುವುದು



ತುಮಕೂರು: ಕಟ್ಟುವಂತಹ ಕವಿತೆಗಳು ಬಹುತೇಕ ವಾಚ್ಯವಾಗಿ, ಪ್ರಾಸಬದ್ಧವಾ ಗಿರುತ್ತವೆ. ಕವಿತೆಯನ್ನು ಕಟ್ಟುವುದಲ್ಲ. ಅದು ನಮ್ಮೊಳಗೆ ಹುಟ್ಟಬೇಕು. ಅನುಭವ ನಮ್ಮೊಳಗೆ ಹರಳು ಗಟ್ಟಬೇಕು. ಕವನ ನಮ್ಮೊಳಗಿನ ಬೆಳಕು. ಈ ಬೆಳಕನ್ನು ಹೇಗೆ ಈಚೆ ತರಬೇಕೆಂಬುದು ಪ್ರತಿ ಕವಿಯ ಸವಾಲು. ಅಂತಹ ಸವಾಲು ಎದುರಿಸಿ ದರೆ ಮಾತ್ರ ಉತ್ತಮವಾದ ಕವಿತೆಯನ್ನು ರಚಿಸ ಬಹುದು ಎಂದು ಪ್ರಸಿದ್ಧ ಕವಯತ್ರಿ ಡಾ. ಬಿ.ಸಿ. ಶೈಲಾ ನಾಗರಾಜ್ ಕವಿಗಳಿಗೆ ಕಿವಿಮಾತು ಹೇಳಿದರು.

ಅವರು ಜಿಲ್ಲಾ ಆರ್ಯ ವೈಶ್ಯ ಸಾಹಿತ್ಯ ಪರಿಷತ್ತು, ಚಿಕ್ಕಪೇಟೆ, ತುಮಕೂರು, ವಾಸವಿ ಯುವಜನ ಸಂಘ, ಚಿಕ್ಕಪೇಟೆ, ತುಮ ಕೂ ರು ಹಾಗೂ ಆವೋಪ, ಗಾಂಧಿ ನಗರ, ಇವರುಗಳ ಸಂಯುಕ್ತ ಆಶ್ರಯದಲ್ಲಿ ತುಮಕೂರಿನ ಚಿಕ್ಕಪೇಟೆಯ ವಾಸವಿ ಪ್ರಾರ್ಥನಾ ಮಂದಿರದಲ್ಲಿ ಇತ್ತೀಚೆಗೆ ನಡೆದ ವಸಂತ ಕವಿಗೋಷ್ಠಿ–2025 –2025 ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕವಿತೆ ಆತ್ಮ ಸೌಂದರ್ಯವನ್ನು ಸೂಚಿಸು ವಂತಿರಬೇಕು. ಪ್ರತಿ ಕಾವ್ಯವು ಆತ್ಮಸೌಂದ ರ್ಯದಿಂದ ನಮ್ಮೊಳಗೆ ಹುಟ್ಟುವಂತಹುದು. ಕವನಗಳು ಕಾವ್ಯಾತ್ಮಕವಾಗಿರಬೇಕು. ಲಯವು ಕಾವ್ಯದ ಆತ್ಮವಾಗಿದ್ದು, ಪ್ರತಿ ಕಾವ್ಯವು ಹೃದ್ಯವಾಗಿರಬೇಕು ಹಾಗೂ ಲಯಗಾರಿಕೆ ಯಿಂದ ಇರಬೇಕು. ಕವನ ರಚನೆಯು ಪದ ಗಳ ಕಸರತ್ತಲ್ಲ ಎಂದು ಕವಿಗಳು, ವಿಮರ್ಶಕರು ಹೇಳುತ್ತಾರೆ. ಕವನ ರಚನೆ ಸಹಜವಾಗಿ

ಸಮಾರಂಭವನ್ನು ಉದ್ಘಾಟಿಸಿದ ತುಮ ಕೂರಿನ ಗಾಂಧಿ ನಗರದ ಆವೋಪ ಸಂಸ್ಥೆಯ ಅಧ್ಯಕ್ಷ ಬಿ.ಆರ್. ನಟರಾಜ ಶೆಟ್ಟಿ ಮಾತನಾಡಿ, ಸಾಹಿತ್ಯ, ಸಂಗೀತ, ನಮ್ಮ ಸಮಾ ಜದ ಸಂಸ್ಕೃತಿಯಾಗಿದ್ದು, ಉತ್ತಮ ಸಾಹಿತ್ಯ ವನ್ನು ರಚಿಸಿ ಸಮಾಜದ ಅಂಕು–ಡೊಂಕುಗಳನ್ನು ತಿದ್ದುವುದು ಕವಿಗಳ ಕರ್ತವ್ಯವಾಗಿದೆ ಎಂದು ಹೇಳಿದರು.

ತುಮಕೂರು ಜಿಲ್ಲಾ ಆರ್ಯವೈಶ್ಯ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ. ಅಮರನಾಥ್ ಮಾತನಾಡಿ, ಸಾಹಿತ್ಯ ನಮ್ಮ ಸಮಾಜಕ್ಕೆ ತುಂಬಾ ಅಗತ್ಯವಾಗಿದ್ದು, ಒಳ್ಳೆಯ ಕವನಗಳು ನಮಗೆಲ್ಲಾ ಸಂತೋಷ ಕೊಡುತ್ತವೆ. ಕವಿಗಳಿಂದ ಇನ್ನೂ ಉತ್ತಮ ಕವಿತೆಗಳು ರಚನೆಯಾಗಲಿ ಎಂದರು.

ಸಮಾರಂಭದಲ್ಲಿ ಸಮ ಒಟ್ಟು 28 ಕವಿಗಳು ಕವಿತೆಗಳನ್ನು ವಾಚಿಸಿ, ಸಭಿಕರ ಮೆಚ್ಚುಗೆಗೆ ಪಾತ್ರರಾದರು. ಕವಿ ವೆನ್ನಲಕೃಷ್ಣ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. ವಾಸವಿ ಯುವಜನ ಸಂಘದ ಅಧ್ಯಕ್ಷ ಕೆ.ಎಸ್. ನವೀನ್, ಕಾರ್ಯದರ್ಶಿ ಸಿ.ಎನ್. ಪ್ರೀತಮ್, ಆವೋಪ ಸಂಸ್ಥೆಯ ಕಾರ್ಯ ದರ್ಶಿ ಎಂ.ರಾಧಾಕೃಷ್ಣನ್, ಅಬ್ಬಿನಹೊಳೆ ಸುರೇಶ್, ತುಮಕೂರು ಜಿಲ್ಲಾ ಆರ್ಯವೈಶ್ಯ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ ಶಶಿಧರ್ ಉಪಸ್ಥಿತರಿದ್ದರು.

# ಜಾನಕಲ್ ಗ್ರಾಮಕ್ಕೆ ಸರ್ಕಾರಿ ಬಸ್

ಶಿರಾ: ದೇಶಕ್ಕೆ ಸ್ವಾತಂತ್ರ್ಯ ಬಂದು ಬಹು ವರ್ಷಗಳೇ ಸಂದಿದ್ದರೂ ಗ್ರಾಮಕ್ಕೊಂದು ಸರ್ಕಾರಿ ಬಸ್ ಬೇಕೆಂದು ಆಗ್ರಹಿಸುತ್ತಿದ್ದ ಬುಕ್ಕಾಪಟ್ಟಣ ಹೋಬಳಿಯ ಜಾನಕಲ್ ಗ್ರಾಮಸ್ಥರ ಆಸೆ ಈವರೆಗೂ ಈಡೇರಿರಲೇ ಇಲ್ಲ. ಅಂತೂ ಇಂತು ಮಂಗಳವಾರ ಬೆಳಿಗ್ಗೆ ಜಾನಕಲ್ ಗ್ರಾಮಕ್ಕೆ ಸರ್ಕಾರಿ ಬಸ್ ಬಂದು ನಿಂತಾಗ ಸಾರ್ವಜನಿಕರಿಗೆ ಸ್ವಾತಂತ್ರ್ಯ ಲಭಿಸಿದಷ್ಟೇ ಸಂತಸವಾಗಿದೆ.

ಗ್ರಾಮಕ್ಕೊಂದು ಸರ್ಕಾರಿ ಬಸ್ ಬೇಕೆಂದು ಗ್ರಾಮಸ್ಥರು ಚುನಾವಣೆಯ ಸಮಯದಲ್ಲಿ ಓಟು ಕೇಳಲು ಬಂದ ರಾಜಕಾರಣಿಗಳ ಬೆನ್ನಿಗೆ ಬೀಳುತ್ತಲೇ ಇದ್ದರೂ ಈವರೆಗೂ ಯಾವುದೇ ರಾಜಕೀಯ ಧುರೀಣರು ತಲೆ ಕೆಡಿಸಿಕೊಂಡೇ ಇರಲಿಲ್ಲ. ಸಾರಿಗೆ ಬಸ್ ಬಂದ ಕೂಡಲೇ ಇಡೀ ಗ್ರಾಮದ ಜನ ಬಸ್ಸಿಗೆ ಪೂಜೆ ಸಲ್ಲಿಸಿ, ಸಿಹಿ ಹಂಚಿ ಸಂಭ್ರಮಿಸಿದ್ದಾರೆ. ಗ್ರಾಮದ ಪ್ರಮುಖರಾದ ಭರತ್ ಕುಮಾರ್, ಮೈಲಾರಪ್ಪ, ರಮೇಶ್ ಸೇರಿದಂತೆ ಹಲವರು ಇದ್ದರು.

ಈ ಸಂದರ್ಭ ಭಾರತ್ ಮಾತನಾಡಿ, ಹಾಲಿ ಶಾಸಕ ಸುರೇಶ್‌ಬಾಬು, ಮಾಜಿ ಶಾಸಕ ಕಿರಣ್ ಕುಮಾರ್, ಮುರಳಿಧರ ಹಾಲಪ್ಪ, ಗ್ರಾಮದ ಮುಖಂಡ ಮುಕುಂದಪ್ಪ ಸೇರಿದಂತೆ ಅನೇಕ ಪ್ರಮುಖ ಪ್ರಯತ್ನಗಳಿಂದ ಸಾರಿಗೆ ಬಸ್ ಗ್ರಾಮಕ್ಕೆ ಬಂದಿದೆ.

# ಮಕ್ಕಳ ಮನೆ ಅಧ್ಯಕ್ಷರಾಗಿ ಫಣೀಂದ್ರ ಸುರಭಿ



ತುಮಕೂರು: ನಗರದ ಸೋಮೇಶ್ವರಪುರಂನಲ್ಲಿರುವ ಬಡ ಮಕ್ಕಳ ಆಶ್ರಯ ಕುಟೀರ ನೆಲೆ ಅಧ್ಯಕ್ಷರಾಗಿ ಸಿ.ಎ.ಫಣೀಂದ್ರ ಸುರಭಿ ಇತ್ತೀಚೆಗೆ ಆಯ್ಕೆಯಾಗಿದ್ದಾರೆ. ಮೂರು ವರ್ಷಗಳ ಅವಧಿಯ ಆಡಳಿತ ಮಂಡಳಿಗೆ ಇವರು ಆಯ್ಕೆಯಾಗಿದ್ದಾರೆ. ನಿರ್ಗತಿಕ ಕಾರ್ಯದರ್ಶಿಯಾಗಿ ಮಯ್ಯ ಪರಶುರಾ ಜಂಟಿ ಕಾರ್ಯದರ್ಶಿಯಾಗಿ ಶ್ರೀ ದೇವಿ, ಖಜಾಂಚಿಯಾಗಿ ರಮೇಶ್ ಜೋಷಿ, ನಿರ್ದೇಶಕರುಗಳಾಗಿ ಡಾ.ಟಿ.ವಿ. ಅರವಿಂದ್, ಎಂ. ಎನ್.ಈಶ್ವರ್ ಗುಪ್ತ, ಎನ್.ವಿ.ಉದಯಕುಮಾರ್, ಕೆ. ಎಂ.ವೀರೇಂದ್ರ, ಎಂ.ಕೆ. ನಾಗರಾಜರಾವ್, ಸಿ.ಸಿ.ಪಾವಟೆ, ಶ್ರೀನಿವಾಸಮೂರ್ತಿ, ಅನಿತಾ ನಾಗೇಶ್, ಸುಷ್ಮಾ ಶಮಂತ್, ನಳಿನಿ ಕೇಶವಮೂರ್ತಿ ಇವರುಗಳು ಆಯ್ಕೆಯಾಗಿದ್ದಾರೆ.

# ನಾಳೆ ಕಾರ್ಯಾಗಾರ

ತುಮಕೂರು: ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರ ನೇತೃತ್ವದಲ್ಲಿ ಮೇ 17ರಂದು ಬೆಳಿಗ್ಗೆ 10.30 ಗಂಟೆಗೆ ಸಿದ್ಧಾರ್ಥ ನಗರದಲ್ಲಿರುವ ಗಂಗಾಧರಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ಅಭಿನಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ.

# ದೇವಾಲಯದಿಂದ ಹೊರಹಾಕಿದ್ದ ಪ್ರಕರಣ: 10 ಜನರ ವಿರುದ್ಧ ಪ್ರಕರಣ ದಾಖಲು

ಮಧುಗಿರಿ: ತಾಲ್ಲೂಕಿನ ಕವಣದಾಲ ಗ್ರಾಮದಲ್ಲಿ ಪೂಜೆ ಮಾಡಿಸಲು ರಾಮಾಂಜನೇಯ ದೇವಾಲಯ ಪ್ರವೇಶಿಸಿದ್ದ ಪರಿಶಿಷ್ಟ ಜಾತಿ ಯುವಕನನ್ನು ಹೊರಗಡೆ ಕಳುಹಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಮಹಿಳೆಯರು ಸೇರಿ 10 ಜನರ ವಿರುದ್ಧ ಪ್ರಕರಣ ದಾಖಲಾಗಿದೆ.

ಯುವಕ ನೀಡಿದ ದೂರಿನ ಮೇರೆಗೆ ಕವಣದಾಲ ಗ್ರಾಮಸ್ಥರಾದ ಗಿರಿಯಣ್ಣಗೌಡ, ಅನಂತ, ಶಿವಾನಂದ, ಯೋಗೀಶ, ಶಿವಮ್ಮ, ನಿಂಗಮ್ಮ, ಮಂಜುನಾಥ, ಮಹಾಂತೇಶ, ವೀರೇಶ, ಯಶೋದಮ್ಮ ವಿರುದ್ಧ 222 191 (2) (2), 351 (5), 351 (2) (ಶಾಂತಿ ಭಂಗ, ಉದ್ದೇಶ ಪೂರ್ವಕವಾಗಿ ಅವಮಾನ) ಸೇರಿ ವಿವಿಧ ಕಲಂ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ನೀನು ದೇವಸ್ಥಾನದ ಒಳಗಡೆ ಇದ್ದರೆ ಮೈಲಿಗೆಯಾಗುತ್ತದೆ, ಹೊರಗಡೆ ಹೋಗು. ಇಲ್ಲದಿದ್ದರೆ ನಿನ್ನ ಕೊಲೆ ಮಾಡುತ್ತೇವೆ. ನಿನ್ನ ಮುಗಿಸಿ ಬಿಡುತ್ತೇವೆ' ಎಂದು ಬೆದರಿಕೆ ಹಾಕಿದ್ದರು ಎಂದು ಯುವಕ ದೂರಿನಲ್ಲಿ ಉಲ್ಲೇಖಿಸಿದ್ದು, ನಿನ್ನ ಜಾತಿಯವರು ಎಂದೂ ದೇವಸ್ಥಾನದ ಒಳಗೆ ಬಂದಿಲ್ಲ. ನೀನೊಬ್ಬನೇ ಬಂದಿರುವುದು. ಎಂದು ಬೆದರಿಕೆ ಹಾಕಿದ್ದಾರೆ ಎಂದೂ ಸಹ ಆರೋಪಿಸಿದ್ದಾರೆ.

ಯುವಕ ಮೇ 10ರಂದು ಸಂಜೆ ಪೂಜೆ ಮಾಡಿಸಲು ದೇವಸ್ಥಾನಕ್ಕೆ ಹೋಗಿದ್ದರು. ಈ ವೇಳೆ ಸ್ಥಳದಲ್ಲಿದ್ದ ಒಕ್ಕಲಿಗ ಸಮುದಾಯದವರು ಯುವಕನನ್ನು ಹೊರಗಡೆ ಕಳುಹಿಸಿದ್ದರು. ಇದೇ ವಿಚಾರವಾಗಿ ದೇಗುಲದ ಮುಂಭಾಗ ದಲ್ಲಿ ಮಾತಿನ ಚಕಮಕಿ ನಡೆದಿತ್ತು.

ಗಲಾಟೆ ಕುರಿತ ವಿಡಿಯೊ ಸಾಮಾಜಿಕ ಜಾಲ ತಾಣದಲ್ಲಿ ಹರಿದಾಡಿತ್ತು. ಇದರ ಬೆನ್ನಲ್ಲೇ ಮೇ 11ರಂದು ಪೊಲೀಸರು, ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಶಾಂತಿ ಸಭೆ ನಡೆಸಿದ್ದರು. ಮುಂದಿನ ದಿನಗಳಲ್ಲಿ ದೇವಾಲಯಕ್ಕೆ ಹೋಗಲು ಯಾರಿಗೂ ನಿರ್ಬಂಧ ವಿಧಿಸದಂತೆ ಸೂಚಿಸಿದ್ದರು.

# ದುಡಿಮೆಯ ಆಸಕ್ತಿ ಇದೆಯೋ ಅವರು ಮಾತ್ರ ಬೆಳೆಯಲು ಸಾಧ್ಯ

## ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ॥ ರೆ.ಮ.ನಾಗಭೂಷಣ್

ಹುಳಿಯಾರು: ಹೈನುಗಾರಿಕೆಯಲ್ಲಿ ವರ್ಗೀಸ್ ಕುರಿಯನ್‌ವರ ಪಾತ್ರವನ್ನು ನಾವೆಲ್ಲರೂ ಇಂದಿಗೂ ನೆನೆಯಬೇಕು. ಪ್ರಸ್ತುತ ಭಾರತದ ಜನಸಂಖ್ಯೆಗೆ ಎಲ್ಲರಿಗೂ ಹಾಲಿನ ಉತ್ಪನ್ನಗಳನ್ನು ಒದಗಿಸುವ ಅಗತ್ಯತೆಯಿದೆ. ಹಾಗಾಗಿ ಹೈನುಗಾರಿಕೆಯನ್ನು ಅಭಿವೃದ್ಧಿಗೊಳಿಸಬೇಕಾಗಿದೆ ಎಂದು ಚಿಕ್ಕನಾಯಕನಹಳ್ಳಿ ತಾಲ್ಲೂಕ್ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕ ಡಾ॥ ರೆ.ಮ.ನಾಗಭೂಷಣ್ ತಿಳಿಸಿದರು.

ಹುಳಿಯಾರು ಸಮೀಪದ ಬೆಳಗುಲಿ ಗ್ರಾಮದಲ್ಲಿ ಹುಳಿಯಾರಿನ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಿಂದ



ಆಯೋಜಿಸಲಾಗಿರುವ ರಾಷ್ಟ್ರೀಯ ಸೇವಾ ಯೋಜನೆ ಘಟಕ–1 ಮತ್ತು 2 ರ 2024–25 ನೇ ಸಾಲಿನ ವಿಶೇಷ ವಾರ್ಷಿಕ ಶಿಬಿರದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು "ಕರುಣ – ಕರುಗಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮ" ದ ಬಗ್ಗೆ ಮಾಹಿತಿ ನೀಡಿದ ಅವರು ಹಸುಗಳ ವಿವಿಧ ತಳಿಗಳನ್ನು ತಿಳಿಸುತ್ತಾ, "ಅವುಗಳಿಗೂ ಮನುಷ್ಯರಂತೆ ಪೌಷ್ಟಿಕಯುತವಾದ ಸಮತೋಲನ ಆಹಾರವನ್ನು ನೀಡಲು ಅವಶ್ಯಕತೆ ಇದೆ" ಎಂದರು.

ಪಶು ಸಂಗೋಪನೆಯನ್ನು ಮಾಡಿ ಯಶಸ್ವಿಯಾದವರ ಉದಾಹರಣೆಗಳನ್ನು ನೀಡಿದರು. ಮುಂದುವರಿದು, "ಯಾರಲ್ಲಿ ದುಡಿಮೆಯ ಆಸಕ್ತಿ ಇದೆಯೋ ಅವರು ಮಾತ್ರ ಜೀವನದಲ್ಲಿ ಬೆಳೆಯಲು ಸಾಧ್ಯ" ಎಂದರು. ಮೆಕ್ಕೆಜೋಳ, ಶೇಂಗಾ ಹಿಂಡಿ ಹಾಗೂ ವಿವಿಧ ಆಹಾರ ಉತ್ಪನ್ನಗಳನ್ನು ಯಾವ ಪ್ರಮಾಣದಲ್ಲಿ ಹಾಕಬೇಕೆಂದು ತಿಳಿಸಿದರು. ಅಲ್ಲದೆ, ಪಶು ಸಂಗೋಪನೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಸಿಗುವ ಸಾಲ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಡಾ॥ ಸುಷ್ಮಾ ಎಲ್. ಬಿರಾದಾರ್ ಅಧ್ಯಕ್ಷತೆ ವಹಿಸಿದ್ದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಾದ ಎಸ್.ರಮೇಶ್ ಮತ್ತು ಎಸ್.ಲಕ್ಷ್ಮೀ, ಸಹಶಿಬಿರಾಧಿಕಾರಿಗಳಾದ ಎಂ.ಕೆ.ತಿಪ್ಪೇಸ್ವಾಮಿ, ಎನ್.ಬಿ.ಸುಮಯ್ಯ ಮತ್ತಿತರರು ಸೇರಿದಂತೆ ಗ್ರಾಮಸ್ಥರು ಮತ್ತು ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.

## ಪದಾಧಿಕಾರಿಗಳ ಸಭೆಯಲ್ಲಿ ದಲಿತಸೇನೆಯ ರಾಜ್ಯಾಧ್ಯಕ್ಷ ಎಂ.ಎಸ್.ಜಗನ್ನಾಥ್

# 'ಅನ್ಯಾಯದ ವಿರುದ್ಧ ವ್ಯವಸ್ಥಿತ ಹೋರಾಟ ರೂಪಿಸಿ'

ತುಮಕೂರು: ಸಮಾಜದಲ್ಲಿ ಎಲ್ಲಿ ಅನ್ಯಾಯ ಕಂಡು ಬರುತ್ತದೆಯೋ ಅಲ್ಲಿ ದಲಿತ ಸೇನೆ (ರಾಮವಿಲಾಸ್ ಪಾಸ್ವಾನ್) ಹೋರಾಟ ರೂಪಿಸುವ ಮೂಲಕ ಅವರಿಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಎಂದು ದಲಿತಸೇನೆಯ ರಾಜ್ಯಾಧ್ಯಕ್ಷ ಎಂ.ಎಸ್.ಜಗನ್ನಾಥ್ ತಿಳಿಸಿದ್ದಾರೆ.



ನಗರದ ಖಾಸಗಿ ಹೋಟೇಲ್‌ನಲ್ಲಿ ಹಮ್ಮಿಕೊಂಡಿದ್ದ ಪದಾಧಿಕಾರಿಗಳ ನೇಮಕ ಕಾರ್ಯಕ್ರಮದಲ್ಲಿ ಹೊಸದಾಗಿ ದಲಿತ ಸೇನೆ(ರಾಮ್ ವಿಲಾಸ್ ಪಸ್ವಾನ್ ಬಣ) ದ ಜಿಲ್ಲಾ ಯುವ ಘಟಕದ ಅಧ್ಯಕ್ಷರಾಗಿ ನೇಮಕಗೊಂಡ ಅಂಜನಮೂರ್ತಿ, ಉಪಾಧ್ಯಕ್ಷರಾದ ಅರಿಯೂರು ಮಂಜು, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಅನಿತಾ ರಾಮಾಂಜೀನಪ್ಪ,ಮಹಿಳಾ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶೃತಿ ನಾಗೇಶ್, ಉಪಾಧ್ಯಕ್ಷರಾದ ಮಂಜುಳ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ರಾಮಾಂಜೀನಪ್ಪ ಅವರುಗಳಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡು ತಿದ್ದ ಅವರು, ಎಲ್ಲಾ ವರ್ಗದಲ್ಲಿಯೂ ಬಡವರಿದ್ದಾರೆ. ಬಡವರಿಗೆ ಯಾವುದೇ ತೊಂದರೆಯಾದರೂ ಜಾತಿ, ಮತ, ಭೇಧವಿಲ್ಲದೆ ಅವರ ಪರವಾಗಿ ದಲಿತ ಸೇನೆ ನಿಲ್ಲಬೇಕು. ಇದೇ ನಮಗೆ ನಮ್ಮ ನಾಯಕರಾಗಿದ್ದ ದಿ.ರಾಮವಿಲಾಸ್ ಪಾಸ್ವಾನ್ ಅವರು ಹೇಳಿಕೊಟ್ಟಿರುವ ಮಾರ್ಗ ಎಂದರು.

ದಲಿತ ಸೇನೆಯು ಜಿಲ್ಲಾಧ್ಯಕ್ಷರಾದ ಗೂಳೂರು ಸಿದ್ದರಾಜು ನೇತೃತ್ವದಲ್ಲಿ ಜಿಲ್ಲೆಯಲ್ಲಿ ದಲಿತ ಸೇನೆ ಉತ್ತಮವಾಗಿ ಕೆಲಸ ಮಾಡುತ್ತಿದೆ. ಅಸ್ಪಷ್ಯರು, ಶೋಷಿತರ ವಿರುದ್ಧ ನಡೆಯುವ ಘಟನೆಗಳಿಗೆ ತಕ್ಕ ಪ್ರತ್ಯುತ್ತರ ನೀಡುವ ಕೆಲಸವನ್ನು ಮಾಡುತ್ತಾ ಬಂದಿದೆ. ಎಲ್ಲಾ ವರ್ಗದಲ್ಲಿಯೂ ಬಡವರಿದ್ದಾರೆ. ಅವರುಗಳ ಸರಕಾರದ ಸವಲತ್ತುಗಳು ಸಿಗಬೇಕೆಂದರೆ, ಭ್ರಷ್ಟಾಚಾರ ಮುಕ್ತ ಆಡಳಿತ ನಮ್ಮದಾಗಬೇಕು.ಹಾಗಾಗಿ ದಲಿತ ಸೇನೆಯ ಯುವ ಘಟಕದ ಜಿಲ್ಲಾಧ್ಯಕ್ಷರಾಗಿರುವ ಅಜಿಜನಮೂರ್ತಿ ಅವರ ಮೇಲೆ ಗುರುತರ ಜವಾಬ್ದಾರಿ ಗಳಿವೆ. ಯುವಜನತೆಯನ್ನು ಸಂಘಟಿಸಿ, ಅನ್ಯಾಯ, ಭ್ರಷ್ಟಾಚಾರಗಳನ್ನು ಖಂಡಿಸುವ ಮೂಲಕ, ಸಂಘಟನೆಗೆ ಬಲ ತುಂಬಬೇಕೆಂದು ಎಂ.ಎಸ್. ಜಗದೀಶ್ ನುಡಿದರು.

ದಲಿತ ಸೇನೆಯ ಜಿಲ್ಲಾಧ್ಯಕ್ಷ ಗೂಳೂರು ಸಿದ್ದರಾಜು ಮಾತನಾಡಿ, ಇಂದು ಸಮಾಜದಲ್ಲಿರುವ ಎಲ್ಲಾ ವರ್ಗಗಳಿಗೂ ಒಂದಿಲ್ಲೊಂದು ರೀತಿ ಅನ್ಯಾಯಕ್ಕೆ ಒಳಗಾಗುತ್ತಿದ್ದಾರೆ.ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ, ಶೋಷಣೆಯಿಂದ ಮುಕ್ತರನ್ನಾಗಿಸುವ ಗುರಿ ದಲಿತ ಸೇನೆಯ ಮೇಲಿದೆ. ಈ ಕೆಲಸವನ್ನು ನಾನು ಸೇರಿದಂತೆ ಹೊಸದಾಗಿ ಪದಾಧಿಕಾರಿಗಳಾಗಿ ನೇಮಕಗೊಂಡಿರುವ ಎಲ್ಲರೂ ಒಗ್ಗೂಡಿ ಮಾಡುವ ಮೂಲಕ ಸಂಘಟನೆಗೆ ಬಲ ತರುವುದಾಗಿ ತಿಳಿಸಿದರು.

ಈ ವೇಳೆ ನೂತನ ಪದಾಧಿಕಾರಿಗಳು ಹಾಗೂ ದಲಿತ ಸೇನೆ(ರಾಮವಿಲಾಸ್ ಪಾಸ್ವಾನ್ ಬಣ) ಸದಸ್ಯರುಗಳು ಹಾಜರಿದ್ದರು.

# ಕೆಎನ್‌ಆರ್, ಆರ್‌ಆರ್ ಬಳಗದಿಂದ ನಾರಾಯಣಗೌಡರ ಯಾತ್ರೆಗೆ ಶುಭ ಹಾರೈಕೆ

ತುಮಕೂರು: ವಿದೇಶ ಪ್ರವಾಸ ಕೈಗೊಂಡಿರುವ ಹಿರಿಯ ವಕೀಲ, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ನಾರಾಯಣ ಗೌಡರಿಗೆ ಕೆ.ಎನ್.ಆರ್. ಹಾಗೂ ಆರ್.ಆರ್. ಅಭಿಮಾನಿ ಬಳಗದವರು ಶುಭ ಕೋರಿದರು. ಇದರ ಅಂಗವಾಗಿ ನಗರದ ಟಿಎಪಿಎಂಎಸ್ ಕಟ್ಟಡದ ಕೆ.ಎನ್.ಆರ್. ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ನಾರಾಯಣಗೌಡರನ್ನು ಸನ್ಮಾನಿಸಿ ಶುಭ ಕೋರಿದರು. ನಗರಸಭೆ ಮಾಜಿ ಅಧ್ಯಕ್ಷ ಟಿ.ಪಿ.ಮಂಜುನಾಥ್, ವಾಲ್ಮೀಕಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಪುರುಷೋತ್ತಮ್, ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಬಿ.ಜಿ.ವೆಂಕಟೇಗೌಡ, ಹಿಂದುಳಿದ ವರ್ಗಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಧನಿಯಾಕುಮಾರ್, ಮುಖಂಡರಾದ ಲಕ್ಷ್ಮೀನಾರಾಯಣ್, ಟಿ.ಹೆಚ್.ಶಿವಾನಂದ್, ಶಿವನಂಜಪ್ಪ, ತಿಪ್ಪೇಸ್ವಾಮಿ, ಎಂ.ಹೆಚ್.ನಾಗರಾಜು, ನರಸಿಂಹಯ್ಯ, ಜಯಮೂರ್ತಿ, ವೆಂಕಟರೆಡ್ಡಿ ಮೊದಲಾದವರು ಭಾಗವಹಿಸಿ ನಾರಾಯಣಗೌಡರ ವಿದೇಶಿ ಪ್ರಯಾಣಕ್ಕೆ ಶುಭ ಹಾರೈಸಿದರು.

# ಶಿರಡಿ ಸಾಯಿಬಾಬಾ ಮಂದಿರದ ವಾರ್ಷಿಕೋತ್ಸವ: ವಿಶೇಷ ಪೂಜೆ

ತುಮಕೂರು: ನಗರದ ಟೂಡಾ ಕಚೇರಿ ಎದುರಿನ ಸಾಯಿಬಾಬಾ ನಗರದ ಶಿರಡಿ ಸಾಯಿಬಾಬಾ ಮಂದಿರದ 14ನೇ ವಾರ್ಷಿಕೋತ್ಸವ ಸಮಾರಂಭ ಗುರುವಾರ ವೈಭವದಿಂದ ನೆರವೇರಿತು. ಇದರ ಅಂಗವಾಗಿ ವಿಶೇಷ ಪೂಜೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.



ಇದರ ಅಂಗವಾಗಿ ದೇವಸ್ಥಾನವನ್ನು ವಿಶೇಷವಾಗಿ ಅಲಂಕರಿಸಿ ಸಿಂಗರಿಸಲಾಗಿತ್ತು. ಬೆಳಿಗ್ಗೆ ಶಿರಡಿ ಸಾಯಿಬಾಬಾ ಮೂರ್ತಿಗೆ ಕಾಕಡ ಆರತಿ, ಮಂಗಳ ಸ್ನಾನ ನಂತರ ಮಹಾ ಮಂಗಳಾರತಿ, ಮಧ್ಯಾಹ್ನ ಸಾಮೂಹಿಕ ವಿಷ್ಣು ಸಹಸ್ರನಾಮ, ಸಾಯಿಬಾಬಾ ಅಷ್ಟೋತ್ತರ ಪಠಣ, ಸಂಜೆ ಧೂಪ ಆರತಿ, ರಾತ್ರಿ ತೇಜಾರತಿ ಮಾಡಲಾಯಿತು. ಬೆಳಿಗ್ಗೆ ಉಪಹಾರ, ಮಧ್ಯಾಹ್ನ ಹಾಗೂ ರಾತ್ರಿ ಪ್ರಸಾದ ವಿನಿಯೋಗ ವ್ಯವಸ್ಥೆ ಮಾಡಲಾಗಿತ್ತು. ಸಂಜೆ ಮಲ್ಲಿಕಾರ್ಜುನ್ ಮತ್ತು ತಂಡದವರಿಂದ ಭಕ್ತಿಗೀತೆಗಳ ಗಾಯನ ಕಾರ್ಯಕ್ರಮವಿತ್ತು. ಬೆಳಗಿನಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಶಿರಡಿ ಸಾಯಿಬಾಬಾರ ದರ್ಶನ ಪಡೆದು ಪೂಜೆ ಸಲ್ಲಿಸಿದರು.


ಈ ವೇಳೆ ಮಾತನಾಡಿದ ಶಿರಡಿ ಸಾಯಿಬಾಬಾ ಮಂದಿರ ಟ್ರಸ್ಟ್ ಅಧ್ಯಕ್ಷ ನಟರಾಜ ಶೆಟ್ಟರು, ಟ್ರಸ್ಟ್‌ನಿಂದ ನಿರಂತರವಾಗಿ ಸಾಮಾಜಿಕ, ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ಬಡ ವಿದ್ಯಾರ್ಥಿಗಳಿಗೆ ಪಠ್ಯಪರಿಕರ ವಿತರಣೆ ಸೇರಿದಂತೆ ವಿವಿಧ ಸೇವಾ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ ಎಂದರು.

ತುಮಕೂರು ವಿಶ್ವವಿದ್ಯಾಲಯದ ಸುಮಾರು 2 ಸಾವಿರ ವಿದ್ಯಾರ್ಥಿಗಳಿಗೆ ಮೂರು ವರ್ಷಗಳಿಂದ ಪ್ರತಿದಿನ ಮಧ್ಯಾಹ್ನದ ಉಚಿತವಾಗಿ ಪ್ರಸಾದ ವ್ಯವಸ್ಥೆ ಮಾಡಲಾಗುತ್ತಿದೆ. ಹೊರ ಊರುಗಳಿಂದ ಕಾಲೇಜಿಗೆ ಬರುವ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಮಧ್ಯಾಹ್ನ ಹಸಿವಿನಿಂದ ಉಳಿಯಬಾರದು ಎಂದು ಪಾವಗಡದ ಡಾ.ಜಪಾನಂದ ಸ್ವಾಮೀಜಿಗಳ ನೇತೃತ್ವದಲ್ಲಿ ಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಶಿರಡಿ ಸಾಯಿಬಾಬಾ ಮಂದಿರದಲ್ಲಿ ಪ್ರಸಾದ ತಯಾರಿಸಿ ಬಾಬಾರಿಗೆ ನೈವೇದ್ಯ ಮಾಡಿದ ನಂತರ ವಿದ್ಯಾರ್ಥಿಗಳಿಗೆ ವಿತರಿಸಲಾಗುವುದು ಎಂದು ಹೇಳಿದರು.

ಟ್ರಸ್ಟ್ ಉಪಾಧ್ಯಕ್ಷ ಎಂ.ಬಸವಯ್ಯ, ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್, ಖಜಾಂಚಿ ಜಿ.ಎಸ್.ಶ್ರೀಧರ್, ಸುಜಯ್ ಬಾಬು ಮೊದಲಾದವರು ಭಾಗವಹಿಸಿದ್ದರು.

# ರೈತರೇ ವೈಜ್ಞಾನಿಕ ಚಿಂತನೆಯಿಂದ ಕೃಷಿ ಮಾಡಲು ಮುಂದಾಗಿ – ಡಾ. ಎಂ.ಪಿ.ಪವನ್

ತಿಪಟೂರು: ರೈತರು ತಾವು ಕಷ್ಟಪಟ್ಟು ಬಿತ್ತುವ ಬೆಳೆಗಳ ಆರೋಗ್ಯಕರ ಬೆಳವಣಿಗೆಗೆ ಅಗತ್ಯವಾಗಿರುವ ಸೂರ್ಯನ ಬೆಳಕು, ಗಾಳಿ, ನೀರು, ಪೋಷಕಾಂಶ ಗಳು ಪ್ರತಿಯೊಂದು ಗಿಡಕ್ಕೆ ಸಮರ್ಪಕ ವಾಗಿ ದೊರೆಯುವಂತೆ ವೈಜ್ಞಾನಿಕ ಚಿಂತನೆಯಿಂದ ಕೃಷಿ ಮಾಡಲು ಮುಂದಾಗಬೇಕೆಂದು ಸಹಾಯಕ ಕೃಷಿ ನಿರ್ದೇಶಕ ಡಾ. ಎಂ.ಪಿ. ಪವನ್ ತಿಳಿಸಿದರು.




ತಾಲೂಕಿನ ಕಸಬಾ ಹೋಬಳಿಯ ಚಿಕ್ಕ ರಂಗಾಪುರ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ಆಹಾರ ಮತ್ತು ಪೌಷ್ಠಿಕ ಭದ್ರತಾ ಯೋಜನೆಯಡಿ ಉಚಿತ ಬಿತ್ತನೆ ಬೀಜ ವಿತರಣೆ, ಬೀಜೋಪಚಾರ ಆಂದೋಲನ ಮತ್ತು ಪೀಡೆನಾಶಕಗಳ ಸಮರ್ಪಕ ಮತ್ತು ಸುರಕ್ಷಿತ ಬಳಕೆ ಕುರಿತು ತರಬೇತಿ ನೀಡಿದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಎರಡು ನೂರು ಹೆಕ್ಟೆರ್ ಪ್ರದೇಶದಲ್ಲಿ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆಯಡಿ ಹೆಸರು ಬೆಳೆಯ ಸಾಲು ಬಿತ್ತನೆ ಪ್ರಾತ್ಯಕ್ಷಿಕೆಯನ್ನು ಕೈಗೊಳ್ಳಲಾಗಿದೆ. ಭೂಮಿಯನ್ನ ಹದ ಮಾಡಿದ ನಂತರ ಶಿಫಾರಸ್ಸು ಮಾಡಿದ ಪೂರ್ಣ ಪ್ರಮಾಣದ ರಸಗೊಬ್ಬರಗಳನ್ನು ಮಣ್ಣಿನಲ್ಲಿ ಬೆರೆಸಿ ಸಾಲಿನಿಂದ ಸಾಲಿಗೆ ಹನ್ನೆರಡು ಅಂಗುಲ ಹಾಗೂ ಬೀಜದಿಂದ ಬೀಜಕ್ಕೆ ನಾಲ್ಕು ಅಂಗುಲ ಅಂತರದಲ್ಲಿ ಬಿತ್ತನೆ ಮಾಡಬೇಕು. ಇದರಿಂದ ಸಸ್ಯಗಳ ನಡುವೆ ನೀರು ಮತ್ತು ಪೋಷಕಾಂಶ ಗಳನ್ನು ಪಡೆಯುವ ಸ್ಪರ್ಧೆ ಕಡಿಮೆಯಾಗುತ್ತದೆ. ಬೆಳೆಗಳ ಬೆಳವಣಿಗೆಗೆ ಅಗತ್ಯವಾಗಿರುವ ಸೂರ್ಯನ ಬೆಳಕು, ಗಾಳಿ, ನೀರು, ಪೋಷಕಾಂಶಗಳು ಪ್ರತಿಯೊಂದು ಗಿಡಕ್ಕೆ ಸಮರ್ಪಕವಾಗಿ ದೊರೆಯುತ್ತದೆ. ಬಿತ್ತಿದ ನಲವತ್ತು ದಿವಸಗೊಳಗಾಗಿ ಎರಡು ಭಾರಿ ಅಂತರ ಬೇಸಾಯ ಮಾಡಿ ಕಳೆ ನಿಯಂತ್ರಣ ಮಾಡುವುದರಿಂದ ಉತ್ತಮ ಗುಣಮಟ್ಟ ಹಾಗೂ ಇಳುವರಿ ಪಡೆಯಲು ಸಾಧ್ಯ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತ ನಾಡಿದ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಯೋಗೀಶ್, ರೈತರು ಕೃಷಿ ಇಲಾಖೆಯ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಅಲ್ಲದೆ ಹೆಚ್ಚುತ್ತಿರುವ ಜನಸಂಖ್ಯೆಗೆ ಆಹಾರ ನೀಡುವ ಸದುದ್ದೇಶದಿಂದ ಆಹಾರ ಮತ್ತು ಪೌಷ್ಠಿಕ ಭದ್ರತಾ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆ. ಆಹಾರ ಬೆಳೆಗಳ ವಿಸ್ತೀರ್ಣ, ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವುದು ಈ ಯೋಜನೆಯ ಗುರಿಗಳಾಗಿವೆ. ಕೃಷಿಯಲ್ಲಿ ಸುಧಾರಿತ ಬೇಸಾಯ ಕ್ರಮಗಳನ್ನು ಅಳವಡಿಸಿಕೊಂಡು ಉತ್ತಮ ಇಳುವರಿಯನ್ನು ಪಡೆಯಬಹುದು ಎಂದು ತಿಳಿಸಿದರು.

ಕೃಷಿ ವಿಜ್ಞಾನಿ ಡಾ. ಪದ್ಮನಾಭ್ , ಕೃಷಿ ಅಧಿಕಾರಿ ಡಾ. ಎಂ.ಜಿ. ಸವಿತಾ ಮಾತ ನಾಡಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿಯ ಸದಸ್ಯ ಶಿವಶಂಕರ್, ಕೃಷಿಕ ಸಮಾಜದ ಸದಸ್ಯರಾದ ಬಸವ ರಾಜು, ಯೋಗಾನಂದ, ಆತ್ಮ ಯೋಜನೆಯ ಮಹೇಶ್, ಕೃಷಿ ಇಲಾಖೆಯ ಸಿಬ್ಬಂದಿಗಳಾದ ರವಿಶಂಕರ್, ಕಲಾವತಿ, ಪ್ರಗತಿ ಪರ ರೈತರಾದ ಶಂಕರಮೂರ್ತಿ, ಪರಮಶಿವಯ್ಯ, ಶಂಕರಪ್ಪ, ಶಂಭುಲಿಂಗಪ್ಪ ಮತ್ತಿತರಿದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper